# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 342 |
| ಸದಸ್ಯರ ಹೆಸರು | : | ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | 15.09.2022 |
| ಉತ್ತರಿಸಬೇಕಾದ ಸಚಿವರು | : | ಮುಖ್ಯಮಂತ್ರಿಯವರು |

****

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಬೆಂಗಳೂರು ನಗರದ ಬಸವನಗುಡಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯ ವಿವಿಧ ಬಡಾವಣೆಗಳಲ್ಲಿ ಸುಮಾರು 40 ವರ್ಷಗಳ ಹಿಂದೆ ಜಮೀನನ್ನು ಭೂಸ್ವಾಧೀನ ಪಡಿಸಿಕೊಂಡು ಬದಲಿ ನಿವೇಶನಗಳನ್ನು ಬಡಿಎ ಹಂಚಿಕೆ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ಕತ್ರಿಗುಪ್ಪೆ ಗ್ರಾಮದ ಸರ್ವೆ ನಂ. 10ರ 94-37ಗುಂಟೆ ಜಮೀನನ್ನು ಬನಶಂಕರಿ 3ನೇ ಹಂತದ ಬಡಾವಣೆಗೆ ದಿನಾಂಕ: 28.10.1971 ರಂದು ಅಂತಿಮ ಅಧಿಸೂಚನೆ ಹೊರಡಿಸಲಾಗಿರುತ್ತದೆ.<br><br>ಸದರಿ ಸರ್ವೆ ನಂ. 10 ರಲ್ಲಿ ದುರಸ್ತಿಯಾಗಿರುವ, ಹೊಸ ನಂ. 119, 120/1ಎ, 120/1ಬಿ, 120/1ಸಿ, 120/1ಡಿ, 120/2ಎ, 120/2ಬಿ, 120/2ಸಿ, 120/2ಡಿ ರ ಒಟ್ಟಾರೆ 24-15 ಗುಂಟೆ ಜಮೀನಿಗೆ ಪ್ರತ್ಯೇಕವಾಗಿ ಅವಾರ್ಡ್‌ನ್ನು ರಚಿಸಿ, 1974 ರಿಂದ 1986 ರ ಅವಧಿಯಲ್ಲಿ ಸ್ವಾಧೀನ ಪಡಿಸಿಕೊಳ್ಳಲಾಗಿದೆ.<br><br>ಉಳಿದ 70-22ಗುಂಟೆ ಜಮೀನಿನ ಪೈಕಿ 2-00ಎಕರೆ ಜಮೀನನ್ನು ಪ್ರಾಧಿಕಾರವು ದಿನಾಂಕ: 24.01.1974 ರಂದು ನೇರವಾಗಿ ಭೂಮಾಲೀಕರಿಂದ ಕ್ರಯಕ್ಕೆ ಪಡೆಯಲಾಗಿದೆ. ಉಳಿದ 68-22ಗುಂಟೆ ಜಮೀನಿಗೆ ಅವಾರ್ಡ್ ಅನುಮೋದನೆಯಾಗಿದ್ದು, ಜಮೀನನ್ನು ದಿನಾಂಕ: 30.05.1980 ರಂದು ಸ್ವಾಧೀನಪಡಿಸಿಕೊಳ್ಳಲಾಗಿದೆ. ಅಂದರೆ ಪೂರಾ 94-37ಗುಂಟೆ ಜಮೀನು ಭೂಸ್ವಾಧೀನವಾಗಿರುತ್ತದೆ. ಅದರಂತೆ, ಕತ್ರಿಗುಪ್ಪೆ ಗ್ರಾಮದ ಸರ್ವೆ ನಂ. 10 ರ 94-37ಗುಂಟೆ ಪೂರ್ತಿ ಜಮೀನು ಪ್ರಾಧಿಕಾರದ ಸ್ವತ್ತಾಗಿರುತ್ತದೆ.<br><br>ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ (ನಿವೇಶನಗಳ ಹಂಚಿಕೆ) ನಿಯಾಮಾವಳಿಗಳಂತೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಭೂಸ್ವಾಧೀನ ಪಡಿಸಿಕೊಂಡ ಕ್ರಮದಿಂದ ರೆವಿನ್ಯೂ ನಿವೇಶನಗಳನ್ನು ಕಳದುಕೊಂಡ ನಿವೇಶನದಾರರಿಗೆ ಬದಲಿ ನಿವೇಶನ ಹಂಚಿಕೆ ಮಾಡಲು ಅವಕಾಶವಿರುವುದಿಲ್ಲ.<br><br>ಆದುದರಿಂದ, ಕತ್ರಿಗುಪ್ಪೆ ಗ್ರಾಮದ ಸರ್ವೆ ನಂ. 10ರ ಜಮೀನನ್ನು ಬನಶಂಕರಿ 3ನೇ ಹಂತ ಬಡಾವಣೆ ನಿರ್ಮಾಣಕ್ಕಾಗಿ ಅಂತಿಮ ಅಧಿಸೂಚನೆ ಹೊರಡಿಸಲಾಗಿದ್ದು, ಸದರಿ ಯೋಜನೆಯಡಿಯಲ್ಲಿ ರೆವಿನ್ಯೂ ನಿವೇಶನಗಳಿಗೆ ಬದಲಿ ನಿವೇಶನಗಳನ್ನು ಹಂಚಿಕೆ ಮಾಡಲು ಅವಕಾಶ ಕಲ್ಪಿಸಿರುವುದಿಲ್ಲ. |
| ಆ | ಬಂದಿದ್ದಲ್ಲಿ, ಸರ್ಕಾರವು ಕೈಗೊಂಡಿರುವ ಕ್ರಮಗಳೇನು | |
| ಇ | ಭೂಮಿಯನ್ನು ಕಳೆದುಕೊಂಡು ನಿರಾಶ್ರಿತರಾದವರಿಗೆ ಸರ್ಕಾರವು ಶೀಘ್ರವಾಗಿ ಬದಲಿ ನಿವೇಶನಗಳನ್ನು (ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ಕತ್ರಿಗುಪ್ಪೆ ಗ್ರಾಮದ ಸರ್ವೆ ನಂ. 10 ಬನಶಂಕರಿ 3ನೇ ಹಂತದಲ್ಲಿ ಖಾಲಿಯಿರುವ) ಹಂಚಿಕೆ ಮಾಡಲು ಉದ್ದೇಶಿಸಿದೆಯೇ | |
| ಈ | ಹಾಗಿದ್ದಲ್ಲಿ, ಸರ್ಕಾರವು ಖಾಲಿ ನಿವೇಶನಗಳನ್ನು ಯಾವ ಕಾಲಮಿತಿಯೊಳಗೆ ಹಂಚಿಕೆ ಮಾಡಲು ಉದ್ದೇಶಿಸಿದೆ? (ಸಂಪೂರ್ಣ ವಿವರವನ್ನು ಒದಗಿಸುವುದು) | |

ಸಂಖ್ಯೆ: ನಅಇ 310 ಬೆಂಭೂಸ್ವಾ 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ